# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1814 (2114)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : BBMP ಯಲ್ಲಿ ಎರವಲು ಸೇವೆ ಮೇಲಿರುವ ಅಧಿಕಾರಿ/ನೌಕರರುಗಳ ಬಗ್ಗೆ

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಸೇವೆ ಸಲ್ಲಿಸುತ್ತಿರುವ ಎರವಲು ಅಧಿಕಾರಿಗಳ ಮತ್ತು ನೌಕರರ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಎರವಲು ನಿಯಮಗಳಿಗೆ ವಿರುದ್ಧವಾಗಿ ಬಹಳ ವರ್ಷಗಳಿಂದ ಎರವಲು ಸೇವೆ ಆಧಾರದ ಮೇಲೆ ಬಿ.ಬಿ.ಎಂ.ಪಿ.ಯಲ್ಲಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿಗಳನ್ನು ಮತ್ತು ನೌಕರರನ್ನು ಮಾತೃ ಇಲಾಖೆಗೆ ಕಳುಹಿಸಲು ಕ್ರಮ ಜರುಗಿಸಲಾಗುವುದೇ ;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿಯೇ, ಅತ್ಯಂತ ವೈಜ್ಞಾನಿಕವಾದ ರೀತಿಯಲ್ಲಿ, ಸಮಗ್ರವಾಗಿ ಸೇವಾ ನೇಮಕಾತಿ ನಿಯಮಗಳನ್ನು (ಸಿ ಅಂಡ್ ಆರ್ ರೂಲ್ಸ್) ರೂಪಿಸುವ ಮೂಲಕ, ಖಾಯಂ ಆಗಿ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರನ್ನು ಹಂತ ಹಂತವಾಗಿ ನೇಮಕ ಮಾಡಿಕೊಳ್ಳಲು ಕ್ರಮ ಜರುಗಿಸಲಾಗುವುದೇ ; ಬಿ.ಬಿ.ಎಂ.ಪಿ.ಯನ್ನು ಎರವಲು ಸೇವೆಯಿಂದ ಮುಕ್ತಗೊಳಿಸಲು ಕ್ರಮ ಜರುಗಿಸಲಾಗುವುದೇ ?